## <u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ</u>

## <u>ಸಿಸಿ ನಂ.**832/2022**</u>

ಚಾಸಾ-05 ಪ್ರಾಸಾ-04

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ:30.05.2025

| | | |
|---|---|---|
| ಹೆಸರು | : | ಫಯಾಜ @ ಫಯಾಜುದ್ದೀನ |
| ತಂದೆಯ ಹೆಸರು | : | ಅಮೀನಸಾಬ |
| ವಯಸ್ಸು | : | 40 ವರ್ಷ |
| ಉದ್ಯೋಗ | : | ಚಾಲಕ ಆರೋಗ್ಯ ಇಲಾಖೆ ಗೊಬ್ಬರ |
| ವಾಸಸ್ಥಳ | : | ಗೊಬ್ಬರ |

-: <u>ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-</u>

2021-22 ನೇ ಇಸ್ವಿಯಲ್ಲಿ ಅಫಜಲಪೂರ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಾಲಕನಾಗಿ ನಿಯೋಜನೆಗೊಂಡು ಕರ್ತವ್ಯ ನಿರ್ವಹಿಸಿರುತ್ತೇನೆ. ಪ್ರಸುತ್ತ ನಾನು ಆರೋಗ್ಯ ಇಲಾಖೆ ಗೊಬ್ಬರ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಾಲಕನಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ಚಾಸಾ-1 ಮತ್ತು 4 ರವರು ಖಾಸಗಿ ವಾಹನ ತೆಗೆದುಕೊಂಡು ಆಸ್ಪತ್ರೆಗೆ ಭೇಟಿಗ ಹೋಗಿರುತ್ತಾರೆ ಆ ದಿನ ನಾನು ಅಫಜಲಪೂರ ಸಾರ್ವಜನಿಕ ಆಸ್ಪತ್ರೆಯಲ್ಲಿ ಕರ್ತವ್ಯದಲ್ಲಿದ್ದಾಗ ಸದರಿ ಚಾಸಾ-1 ಮತ್ತು 4 ರವರು ನನಗೆ ದೂರವಾಣಿ ಕರೆ ಮಾಡಿ ಬಾ ಅಂತಾ ಹೇಳಿ ಕರೆದಿರುತ್ತಾರೆ. ಅದಕ್ಕೆ ನಾನು ಅವರ ಹತ್ತಿರ ಹೋಗಿ ಅವರನ್ನು ಕರೆದುಕೊಂಡು ಅಫಜಲಪೂರ ಸಾರ್ವಜನಿಕ ಆಸ್ಪತ್ರೆಗೆ ಬಂದಿರುತ್ತೇನೆ. ಇಷ್ಟು ಹೊರತು ಪಡಿಸಿ ಬೇರೆ ಏನು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ಸ.ಸ.ಅ. ರವರಿಂದ</u>

ದಿಃ 05.08.2021 ರಂದು ಮಧ್ಯಾಹ್ನ 12.00 ಗಂಟೆಗೆ ನಾನು ಅಫಜಲಪೂರ ಸಾರ್ವಜನಿಕ ಆಸ್ಪತ್ರೆಯ ಕರ್ತವ್ಯದಲ್ಲಿ ಇದ್ದೆ ಎಂದರೆ ಸರಿ. ನಮ್ಮ ಆಸ್ಪತ್ರೆಯ ಮುಖ್ಯ ವೈದಾಧಿಕಾರಿಯಾದ ಚಾಸಾ-1 ರವರು ನಮ್ಮ ಆಸ್ಪತ್ರೆಯಲ್ಲಿ ವೈದ್ಯರಾಗಿ ಕೆಲಸ ಮಾಡುವ ಡಾಃಸಂಗಮೇಶ ಟಕ್ಕಳಕಿ ರವರು ಆಸ್ಪತ್ರೆಗೆ ಹಾಜರಾತಿ ಪುಸಕ್ತದಲ್ಲಿ ಸಹಿ ಹಾಕಿ ಅವರು ತಂದೆ ನಡೆಸುವ ಖಾಸಗಿ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿರುವುದರಿಂದ ಅನಿರೀಕ್ಷಿತ ದಾಳಿಯನ್ನು ಮಾಡಿರುತ್ತಾರೆ ಎಂದರೆ ಸಾಕ್ಷಿಯು ಚಾಸಾ-1 ಮತ್ತು 4 ರವರು ಅನಿರೀಕ್ಷಿತ ದಾಳಿಗೆ ಖಾಸಗಿ ವಾಹನದಲ್ಲಿ ಹೋಗಿರುತ್ತಾರೆ. ತದ ನಂತರ ನನಗೆ ಫೋನ ಮಾಡಿ ಕರೆಯಿಸಿರುತ್ತಾರೆ ಎಂದು ನುಡಿಯುತ್ತಾರೆ.

ನಾನು ಚಾಸಾ-1,3 ಮತ್ತು 4 ರವರು ಸದರಿ ಡಾಃಸಂಗಮೇಶ ಟಕ್ಕಳಕಿ ರವರ ಖಾಸಗಿ ಆಸ್ಪತ್ರೆಯ ಮೇಲೆ ದಾಳಿ ಮಾಡಿದಾಗ ಚಾಸಾ-1 ರವರು ವಿಡಿಯೋ ಮಾಡಿಕೊಳ್ಳುತ್ತಿದ್ದಾಗ ಆಸ್ಪತ್ರೆಯ ಔಷಧಿ ಅಂಗಡಿಯಲ್ಲಿ ಕೆಲಸ ಮಾಡುತ್ತಿದ್ದ ಬಸವರಾಜ ಉಪ್ಪಾರ ಆರೋಪಿಯು ಓಡಿ ಬಂದು ಚಾಸಾ-1 ರವರ ಎದೆಯ ಮೇಲಿನ ಅಂಗಿ ಹಿಡಿದು ಏಳೆದಾಡಿ ಇಲ್ಲಿಗೆ ಏಕೆ ಬಂದಿರಿ ಅಂತಾ ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸಾಕ್ಷಿಯು ನಾನು ಹೋಗುವಷ್ಟರಲ್ಲಿ ಎಲ್ಲಾ ಮುಗಿದಿತ್ತು ಆದರೆ ಎಲ್ಲರು ಸ್ಥಳದಲ್ಲಿ ಇದ್ದರು ಎಂದು ನುಡಿಯುತ್ತಾರೆ. ಈ ರೀತಿ ಘಟನೆಯಾದ ಕುರಿತು ನಾನು ದಿಃ 07.08.2021 ರಂದು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸಾಕ್ಷಿಯು ನಾನು ಘಟನಾ ಸ್ಥಳಕ್ಕೆ ಹೋಗಿದ್ದೆ ಮತ್ತು ನಾನು ಹೋಗುವಷ್ಟರಲ್ಲಿ ಎಲ್ಲಾ ಮುಗಿದಿತ್ತು ಎಂದು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದು ನುಡಿಯುತ್ತಾರೆ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀಮತಿ **MKP** ವಕೀಲರಿಂದಃ-</u>

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲಾ ಎಂದು ನುಡಿದಿರುತ್ತಾರೆ. ಆದ್ದರಿಂದ ಪಾಟೀ ಸವಾಲು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ ದಂಡಾಧಿಕಾರಿಗಳು
ಅಫಜಲಪೂರ

-